# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 372

ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 07-07-2023

ಉತ್ತರಿಸುವ ಸಚಿವರು : ಕೃಷಿ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದಲ್ಲಿ ಕೃಷಿ ಇಲಾಖೆಯಲ್ಲಿ ಬೀಜ ಪೂರೈಕೆ, ಹೊಸ ಬೆಳೆ ವಿಮಾ ಯೋಜನೆ, ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ, ರೈತ ಸಿರಿ, ಕೃಷಿ ಯಾಂತ್ರೀಕರಣ, ಹಾಗೂ ಕೃಷಿ ಸಂಸ್ಕರಣೆ ಸಸ್ಯ ಸಂಸ್ಕರಣೆ, ಮಣ್ಣಿನ ಸತ್ವ ಹೆಚ್ಚಿಸುವಿಕೆ ಯೋಜನೆ, ಸಾವಯವ ಇಂಗಾಲ ಹೆಚ್ಚಿಸಲು ಅಭಿಯಾನ ಯೋಜನೆಗಳು ಜಾರಿಯಲ್ಲಿವೆಯೇ; | ಕರ್ನಾಟಕ ರಾಜ್ಯದಲ್ಲಿ ಕೃಷಿ ಇಲಾಖೆಯಲ್ಲಿ ಬಿತ್ತನೆ ಬೀಜ ಪೂರೈಕೆ, ಹೊಸ ಬೆಳೆ ವಿಮಾ ಯೋಜನೆ, ರೈತ ಸಿರಿ, ಕೃಷಿ ಯಾಂತ್ರೀಕರಣ, ಸಸ್ಯ ಸಂರಕ್ಷಣೆ ಮತ್ತು ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನ ಯೋಜನೆಗಳು ಜಾರಿಯಲ್ಲಿವೆ.<br><br>2022-23ನೇ ಸಾಲಿನವರೆಗೂ "ಮಣ್ಣಿನ ಸತ್ವ ಹೆಚ್ಚಿಸುವಿಕೆ" ಯೋಜನೆಯನ್ನು ಅನುಷ್ಠಾನ ಮಾಡಲಾಗಿದ್ದು, 2023-24ನೇ ಸಾಲಿಗೆ ಸದರಿ ಯೋಜನೆಯನ್ನು ಕೈಬಿಡಲಾಗಿದೆ. |
| ಆ) | ಈ ಯೋಜನೆಗಳ ಅನುಷ್ಠಾನಕ್ಕಾಗಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಸದರಿ ಯೋಜನೆಗಳು ಪ್ರಸ್ತುತ ಯಾವ ಹಂತದಲ್ಲಿ ಕಾರ್ಯ ನಿರ್ವಹಿಸುತ್ತಿದೆ ಹಾಗೂ ಈ ಯೋಜನೆಗಳಿಂದ ಎಷ್ಟು ರೈತರಿಗೆ ಅನುಕೂಲವಾಗಿದೆ; | **ಬಿತ್ತನೆಬೀಜ :**<br>ರಾಜ್ಯದ ಎಲ್ಲಾ ವರ್ಗದ ರೈತರಿಗೆ ಗರಿಷ್ಠ 2 ಹೆಕ್ಟೇರ್ ಮಿತಿಯೊಳಗೆ ರಿಯಾಯಿತಿ ದರದಲ್ಲಿ 'ಬೀಜಗಳ ಪೂರೈಕೆ' ಕಾರ್ಯಕ್ರಮದಡಿ ಬಿತ್ತನೆ ಬೀಜಗಳನ್ನು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿರುತ್ತದೆ.<br>ಕಳೆದ ಮೂರು ವರ್ಷಗಳ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳ ವಿತರಣೆ ಕಾರ್ಯಕ್ರಮದಡಿ ಅನುಕೂಲ ಪಡೆದ ರೈತರ ವಿವರ :<br><br>**ವರ್ಷ** — **ಫಲಾನುಭವಿಗಳು (ಸಂಖ್ಯೆ ಲಕ್ಷಗಳಲ್ಲಿ)**<br>2020-21 — 16.09<br>2021-22 — 16.02<br>2022-23 — 17.30<br><br>2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರಾಜ್ಯ ಸರ್ಕಾರದ ಬೀಜಗಳ ಪೂರೈಕೆ ಯೋಜನೆಯಡಿ 82.35 ಲಕ್ಷ ಹೆಕ್ಟೇರು ಪ್ರದೇಶದಲ್ಲಿ ಬಿತ್ತನೆ ಕೈಗೊಳ್ಳುವ ಗುರಿ ಇದ್ದು 5.54ಲಕ್ಷ ಕ್ವಿಂಟಲ್ ಬಿತ್ತನೆ ಬೀಜಗಳ ಬೇಡಿಕೆಗೆ, 6.12 ಲಕ್ಷ ಕ್ವಿಂಟಲ್ ಬಿತ್ತನೆ ಬೀಜಗಳು ಲಭ್ಯವಿದ್ದು, ರಾಜ್ಯಾದ್ಯಂತ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳು, ಹೆಚ್ಚುವರಿ ಮಾರಾಟ ಕೇಂದ್ರಗಳು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ |

QR Code ಬಳಸಿ ವಿತರಣೆ ಮಾಡಲು ವ್ಯವಸ್ಥೆ ಮಾಡಲಾಗಿರುತ್ತದೆ. ದಿನಾಂಕ: 03.07.2023 ರವರೆಗೆ ರೈತ ಸಂಪರ್ಕ ಕೇಂದ್ರಗಳಲ್ಲಿ 1,89,797 ಕ್ವಿಂಟಾಲ್ ಗಳಷ್ಟು ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗಿದ್ದು, 1,11,719 ಕ್ವಿಂಟಾಲ್ ಗಳಷ್ಟು ದಾಸ್ತಾನು ರೈತ ಸಂಪರ್ಕ ಕೇಂದ್ರಗಳಲ್ಲಿ ಇರುತ್ತದೆ. ಬಿತ್ತನೆ ಬೀಜ ವಿತರಣೆ ಕಾರ್ಯ ಪ್ರಗತಿಯಲ್ಲಿದೆ.

**ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ:**

ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಕುರಿತು ರೈತರಿಗೆ ಮಾಹಿತಿ ನೀಡಿ ಪ್ರೋತ್ಸಾಹಿಸಲು ಸ್ಥಳೀಯ ಮತ್ತು ರಾಜ್ಯ ಪ್ರಮುಖ ದಿನಪತ್ರಿಕೆಗಳಲ್ಲಿ ಜಾಹೀರಾತು ನೀಡುವ ಮುಖೇನ, ಭಿತ್ತಿಪತ್ರಗಳು ಮತ್ತು ಕರಪತ್ರಗಳ ಮೂಲಕ, ತರಬೇತಿಗಳು, ಸಮೂಹ ಮಾಧ್ಯಮಗಳ ಮೂಲಕ, ಜನಸ್ಪಂದನ ಮತ್ತು ಗ್ರಾಮಸಭೆಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ವಿಮಾ ಸಂಸ್ಥೆಗಳಿಂದಲೂ ಸಹ ಸಮೂಹ ಮಾಧ್ಯಮಗಳ ಮತ್ತು ಸಂವಹನ ಚಟುವಟಿಕೆಗಳಾದ "Radio jingle", ದೂರದರ್ಶನ ಚಂದನ ವಾಹಿನಿಯಲ್ಲಿ "Scrolling Message Content", ಕರಪತ್ರ ಹಾಗೂ ಭಿತ್ತಿಪತ್ರಗಳ ಮೂಲಕ ಹೆಚ್ಚಿನ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಅರಿವು ಮೂಡಿಸಲಾಗುತ್ತಿದೆ.

ಪ್ರಸ್ತುತ ಮುಂಗಾರು ಹಂಗಾಮಿನ ನೋಂದಣಿ ಕಾರ್ಯ ಪ್ರಗತಿಯಲ್ಲಿರುತ್ತದೆ.

2020-21 ರಿಂದ 2022-23 ನೇ ಸಾಲಿನವರೆಗೆ ಒಟ್ಟು 26.11 ಲಕ್ಷ ರೈತ ಫಲಾನುಭವಿಗಳಿಗೆ ಬೆಳೆ ವಿಮೆ ಪರಿಹಾರವನ್ನು ಇತ್ಯರ್ಥ ಪಡಿಸಲಾಗಿರುತ್ತದೆ. ವರ್ಷಾವಾರು ವಿವರ ಈ ಕೆಳಕಂಡಂತಿದೆ.

| ವರ್ಷ | ಫಲಾನುಭವಿಗಳಸಂಖ್ಯೆ (ಲಕ್ಷಗಳಲ್ಲಿ) |
|---|---|
| 2020-21 | 5.07 |
| 2021-22 | 8.56 |
| 2022-23 | 12.48 |
| ಒಟ್ಟು | 26.11 |

**ಕೃಷಿ ಯಾಂತ್ರೀಕರಣ ಮತ್ತು ಕೃಷಿ ಸಂಸ್ಕರಣೆ ಯೋಜನೆ:**

ಕೇಂದ್ರ ವಲಯದಿಂದ ಬಿಡುಗಡೆಯಾಗುವ ಅನುದಾನವನ್ನು ರಾಜ್ಯವಲಯದ ಅನುದಾನದೊಂದಿಗೆ ಹೊಂದಾಣಿಕೆಗೊಳಿಸಿ ಈ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.

ಕೃಷಿ ಯಂತ್ರೋಪಕರಣ/ಕೃಷಿ ಸಂಸ್ಕರಣಾ ಘಟಕಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಮತ್ತು ಪ.ಜಾ/ಪ.ಪಂಗಡದವರಿಗೆ ಶೇ.90 ರಷ್ಟು ಗರಿಷ್ಟ ಮಿತಿ ರೂ.1.00 ಲಕ್ಷದಂತೆ ಸಹಾಯಧನ ಒದಗಿಸಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಗಳಡಿ ಅನುಕೂಲ ಪಡೆದ ರೈತರ ಸಂಖ್ಯೆ ಕೆಳಕಂಡಂತಿದವೆ;

| ವರ್ಷ | ಕೃಷಿ ಯಾಂತ್ರೀಕರಣ | ಕೃಷಿ ಸಂಸ್ಕರಣೆ |
|---|---|---|
| 2020-21 | 223096 | 572472 |
| 2021-22 | 80126 | 233210 |
| 2022-23 | 53004 | 224783 |
| ಒಟ್ಟು | 356226 | 1030465 |

**ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯೋಜನೆ:**
ಕರ್ನಾಟಕ ರಾಜ್ಯದಲ್ಲಿ ಭಾರತ ಸರ್ಕಾರದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯೋಜನೆಯನ್ನು ದಿನಾಂಕ. 01.02.2019 ರಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಯೋಜನೆಯಡಿ ವಾರ್ಷಿಕ ರೂ.6000/-ಗಳ ಆರ್ಥಿಕ ನೆರವನ್ನು ಅರ್ಹ ರೈತರ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮೂಲಕ ನೀಡಲಾಗುತ್ತಿದೆ. ಸದರಿ ಅನುದಾನವನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುತ್ತಿದೆ.

ಕೇಂದ್ರ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯ ಎಲ್ಲಾ ಅರ್ಹ ರೈತರಿಗೆ ದಿನಾಂಕ 14.08.2019 ರಿಂದ ರಾಜ್ಯ ಸರ್ಕಾರ ದಿಂದ ಹೆಚ್ಚುವರಿಯಾಗಿ ರೂ.4000/ಗಳ ಆರ್ಥಿಕ ನೆರವನ್ನು ಎರಡು ಕಂತುಗಳಲ್ಲಿ ಪಿ.ಎಂ.ಕಿಸಾನ್-ಕರ್ನಾಟಕ ಯೋಜನೆಯಡಿ ನೀಡಲಾಗುತ್ತಿದೆ.

ಪಿ.ಎಂ.ಕಿಸಾನ್ ಯೋಜನೆಯಡಿ ಅರ್ಹರಿರುವ ರೈತರು ಸ್ವಯಂ ಘೋಷಣೆಗಳನ್ನು ನೀಡಿ ಯೋಜನೆಯ fruitspmk.kar.gov.in ಪೋರ್ಟಲ್ ನಲ್ಲಿ ನೊಂದಾಯಿಸಿರುತ್ತಾರೆ. ಹೀಗೆ ನೊಂದಾಯಿತ ರೈತರ ವಿವರಗಳು ಯೋಜನೆಯ ಮಾರ್ಗಸೂಚಿಯನ್ವಯ ಪರಿಶೀಲಿಸಲ್ಪಟ್ಟು ಅರ್ಹರಿರುವ ರೈತರ ಮಾಹಿತಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಹೀಗೆ ಸಲ್ಲಿಸಿದ ರೈತರ ವಿವರಗಳು ಕೇಂದ್ರ ಸರ್ಕಾರದಲ್ಲಿ ವಿವಿಧ ಪರಿಶೀಲನಾ ಪ್ರಕ್ರಿಯೆಗೊಳಪಟ್ಟು ಊರ್ಜಿತವಾದ ರೈತರಿಗೆ ಆರ್ಥಿಕ ನೆರವು ವರ್ಗಾಯಿಸಲಾಗುತ್ತಿದೆ. ಎಲ್ಲಾ ಅರ್ಹ ರೈತರಿಗೆ ಅವರ ಅರ್ಜಿ ಊರ್ಜಿತವಾದ ದಿನಾಂಕದಿಂದ ಅನ್ವಯವಾಗುವಂತೆ ಸೌಲಭ್ಯ ದೊರೆಯುತ್ತದೆ. ರೈತರ ನೊಂದಣಿ, ತಂತ್ರಾಂಶದಲ್ಲಿ ಪರಿಶೀಲನೆ, ಕೇಂದ್ರ ಸರ್ಕಾರಕ್ಕೆ ಅರ್ಹ ರೈತರ ಮಾಹಿತಿಗಳ ಸಲ್ಲಿಕೆ ಪ್ರಕ್ರಿಯೆಗಳನ್ನು ಸರಳೀಕರಣಗೊಳಿಸಲಾಗಿದ್ದು, ಆರ್ಥಿಕ ನೆರವು ವರ್ಗಾವಣೆ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ಇಲ್ಲಿಯವರೆಗೆ, 53.83 ಲಕ್ಷ ರೈತ ಕುಟುಂಬಗಳು ಕನಿಷ್ಠ ಒಂದು ಕಂತು ಪಡೆಯುವ ಮೂಲಕ ಯೋಜನೆಯ ಲಾಭವನ್ನು ಪಡೆದಿರುತ್ತಾರೆ.

**ರೈತಸಿರಿ ಯೋಜನೆ:**
ರಾಜ್ಯದ ಸಿರಿಧಾನ್ಯ ಕ್ಷೇತ್ರವನ್ನು ವಿಸ್ತರಿಸುವ ನಿಟ್ಟಿನಲ್ಲಿ "ರೈತ ಸಿರಿ" ಯೋಜನೆಯನ್ನು 2019-20 ನೇ ಸಾಲಿನಿಂದ ಪ್ರಾರಂಭಿಸಿದ್ದು, ಪ್ರಮುಖ ಸಿರಿಧಾನ್ಯಗಳಾದ ಊದಲು, ನವಣೆ, ಹಾರಕ, ಕೊರಲೆ, ಸಾಮೆ ಮತ್ತು ಬರಗು ಬೆಳೆಗಳನ್ನು ಬೆಳೆಯುವ ರೈತರಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ರೈತರಿಗೆ ಪ್ರತಿ ಹೆಕ್ಟೇರ್ ಗೆ ರೂ.10,000/-ಗಳಂತೆ ಗರಿಷ್ಠ 2 ಹೆಕ್ಟೇರ್ ಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.

ಸಿರಿಧಾನ್ಯಗಳ ಸಂಸ್ಕರಣೆಗೆ ಉತ್ತೇಜನ ನೀಡುವ ಉದ್ದೇಶದೊಂದಿಗೆ ಸಿರಿಧಾನ್ಯಗಳ ಸಂಸ್ಕರಣೆ, ಮೌಲ್ಯವರ್ಧನೆ, ವರ್ಗೀಕರಣ, ಪ್ಯಾಕಿಂಗ್ ಮತ್ತು ಬ್ರ್ಯಾಂಡಿಂಗ್ ಯಂತ್ರೋಪಕರಣಗಳಿಗೆ ಒಟ್ಟು ಯಂತ್ರೋಪಕರಣಗಳ ವೆಚ್ಚದ ಮೇಲೆ ಶೇ.50 ರಷ್ಟು ಅಥವಾ ಗರಿಷ್ಠ ರೂ. 10.00 ಲಕ್ಷಗಳವರೆಗೆ ಸಹಾಯಧನವನ್ನು ನೀಡುತ್ತಿದ್ದು ಆಸಕ್ತ ರೈತರು/ರೈತ ಗುಂಪುಗಳು/ರೈತ ಉತ್ಪಾದಕಾ ಗುಂಪುಗಳು/ ನವೋದ್ಯಮಿಗಳು/ ಸಾರ್ವಜನಿಕ ಉದ್ದಿಮೆಗಳು ಪ್ರಸ್ತಾವನೆ ಸಲ್ಲಿಸಿ ಯೋಜನೆಯ ಪ್ರಯೋಜನ ಪಡೆದುಕೊಳ್ಳಬಹುದಾಗಿರುತ್ತದೆ. ವರ್ಷವಾರು ವಿವರ ಈ ಕೆಳಕಂಡಂತಿದೆ.

| ವರ್ಷ | ರೈತರ ಸಂಖ್ಯೆ |
|---|---|
| 2020-21 | 10331 |
| 2021-22 | 18276 |
| 2022-23 | 22292 |
| ಒಟ್ಟು | 50899 |

**"ಮಣ್ಣಿನ ಸತ್ವ ಹೆಚ್ಚಿಸುವಿಕೆ" ಯೋಜನೆ:**
ಮಣ್ಣಿನ ಫಲವತ್ತತೆಯನ್ನು ಉತ್ತಮಪಡಿಸುವ ಸಲುವಾಗಿ ಮಣ್ಣಿಗೆ ಹೆಚ್ಚಿನ ಪ್ರಮಾಣದಲ್ಲಿ ಸಾವಯವ ಗೊಬ್ಬರವನ್ನು ಸೇರಿಸುವ ಅವಶ್ಯಕತೆ ಇರುತ್ತದೆ. ಮಣ್ಣಿನ ಆರೋಗ್ಯವನ್ನು ಕಾಪಾಡಿಕೊಂಡು ಉತ್ಪಾದನಾ ವೆಚ್ಚವನ್ನು ಕಡಿತಗೊಳಿಸುವ ಮೂಲಕ ಕೃಷಿಯನ್ನು ಲಾಭದಾಯಕವಾಗಿ ಮಾಡಿ ರೈತರ ಜೀವನ ಮಟ್ಟ ಸುಧಾರಿಸುವ ಸಲುವಾಗಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಎರೆಹುಳು ಗೊಬ್ಬರ, ಸಾವಯವ ಗೊಬ್ಬರ (ಆರ್ಗಾನಿಕ್ ಮೆನ್ಯೂರ್), ರಂಜಕಯುಕ್ತ ಸಾವಯವ ಗೊಬ್ಬರ(PROM), ಖಾದ್ಯವಲ್ಲದ ಎಣ್ಣೆರಹಿತ ಹಿಂಡಿ ಗೊಬ್ಬರ, ಸಿಟಿ ಕಾಂಪೋಸ್ಟ್(BULK SUPPLY) ಮತ್ತು ಹಸಿರೆಲೆ ಗೊಬ್ಬರ ಬೀಜಗಳನ್ನು ಸಹಾಯಧನದಡಿ ರೈತ ಸಂಪರ್ಕ ಕೇಂದ್ರದ ಮೂಲಕ ಒದಗಿಸಿ, ಅವುಗಳ ಬಳಕೆಯನ್ನು ಉತ್ತೇಜಿಸಲಾಗುತ್ತಿದೆ.

ಕಳೆದ ಮೂರು ವರ್ಷಗಳಲ್ಲಿ ಅನುಕೂಲ ಪಡೆದ ರೈತರ ಸಂಖ್ಯೆ ಈ ಕೆಳಗಿನಂತಿವೆ;

| ವರ್ಷ | ಫಲಾನುಭವಿ ರೈತರ ಸಂಖ್ಯೆ |
|---|---|
| 2020-21 | 141137 |
| 2021-22 | 8721 |
| 2022-23 | 7456 |

**ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನ:**

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮಣ್ಣಿನಲ್ಲಿ ಸಾವಯವ ಅಂಶವು ಕಡಿಮೆಯಾಗುತ್ತಾ ಬಂದಿದ್ದು, ಮಣ್ಣಿಗೆ ಹಸಿರೆಲೆ ಗೊಬ್ಬರಗಳ ಮೂಲಕ ಸಾವಯವ ಇಂಗಾಲ ಸೇರ್ಪಡೆ ಮಾಡುವುದು ಮೂಲ ಉದ್ದೇಶವಾಗಿದೆ ಹಾಗೂ ರೈತರ ತಾಕುಗಳಲ್ಲಿ ಪ್ರಾತ್ಯಕ್ಷಿಕೆಗಳನ್ನು ಕೈಗೊಂಡು ಮಣ್ಣಿನಲ್ಲಿ ಸಾವಯವ ಇಂಗಾಲ ಹೆಚ್ಚಿಸುವ ಉಪಯುಕ್ತತೆಯ ಬಗ್ಗೆ ರೈತರಿಗೆ ಅರಿವು ಮೂಡಿಸುವುದು ಸಹ ಉದ್ದೇಶವಾಗಿರುತ್ತದೆ.

2021-22 ರಿಂದ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ರಿಯಾಯಿತಿ ದರದಲ್ಲಿ ಹಸಿರೆಲೆ ಗೊಬ್ಬರ ಬೀಜಗಳನ್ನು ರೈತ ಸಂಪರ್ಕ ಕೇಂದ್ರದ ಮೂಲಕ ಒದಗಿಸಿ, ಅವುಗಳ ಬಳಕೆಯನ್ನು ಉತ್ತೇಜಿಸಲಾಗುತ್ತಿದೆ.

ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನ ದಡಿ ಕಳೆದ ಮೂರು ವರ್ಷಗಳಲ್ಲಿ ಅನುಕೂಲ ಪಡೆದ ರೈತರ ಸಂಖ್ಯೆ ಈ ಕೆಳಗಿನಂತಿದೆ.

| ವರ್ಷ | ಫಲಾನುಭವಿ ರೈತರ ಸಂಖ್ಯೆ |
|---|---|
| 2020-21 | - |
| 2021-22 | 16658 |
| 2022-23 | 22122 |

**ಸಸ್ಯ ಸಂರಕ್ಷಣಾ ಯೋಜನೆ:**

ರಾಜ್ಯದಲ್ಲಿ ಬೆಳೆಯುವ ಕೃಷಿ ಬೆಳೆಗಳನ್ನು ಬಾಧಿಸುವ ಕೀಟ/ ರೋಗ/ ಕಳೆಯ ಬಾಧೆಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಅಗತ್ಯ ಸಸ್ಯ ಸಂರಕ್ಷಣಾ ಕಾರ್ಯಕ್ರಮಗಳನ್ನು ಕೈಗೊಳ್ಳಲು ಜೈವಿಕ ಪೀಡೆನಾಶಕ ಮತ್ತು ರಾಸಾಯನಿಕ ಪೀಡೆನಾಶಕಗಳನ್ನು ರಿಯಾಯಿತಿ ದರದಲ್ಲಿ ಒದಗಿಸುವ ಸಲುವಾಗಿ ಸಸ್ಯ ಸಂರಕ್ಷಣೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಮತ್ತು ಪ್ರಸಕ್ತ ಸಾಲಿನಲ್ಲಿ ಸದರಿ ಯೋಜನೆಯ ಅನುಷ್ಠಾನಕ್ಕಾಗಿ ಜಿಲ್ಲೆಗಳಿಗೆ ಗುರಿಗಳನ್ನು ನಿಗದಿಪಡಿಸಿ ಮಾರ್ಗಸೂಚಿಯನ್ನು ನೀಡಲಾಗಿರುತ್ತದೆ. ಸಸ್ಯ ಸಂರಕ್ಷಣಾ ಯೋಜನೆಯ ಫಲಾನುಭವಿ ಸಂಖ್ಯೆಯ ವಿವರ ಈ ಕೆಳಕಂಡಂತಿವೆ;

<table>
<tr>
<td></td>
<td></td>
<td>
<table>
<tr><th>ವರ್ಷ</th><th>ಫಲಾನುಭವಿ ರೈತರ ಸಂಖ್ಯೆ</th></tr>
<tr><td>2020-21</td><td>52525</td></tr>
<tr><td>2021-22</td><td>22600</td></tr>
<tr><td>2022-23</td><td>91984</td></tr>
</table>
</td>
</tr>
<tr>
<td>ಇ)</td>
<td>ಈ ಯೋಜನೆಗಳ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರ ಖರ್ಚು ಮಾಡಿರುವ ಹಣವೆಷ್ಟು; ಈ ಯೋಜನೆಗಳು ನಿರಂತರವಾಗಿ ಮುಂದುವರೆಯುತ್ತವೆಯೆ ಅಥವಾ ಇಲ್ಲವೇ; (ವಿವರ ನೀಡುವುದು)</td>
<td>
ಬಿತ್ತನೆಬೀಜ :<br>
ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳ ವಿತರಣೆಗೆ ಕಳೆದ ಮೂರು ವರ್ಷಗಳಲ್ಲಿ ಖರ್ಚು ಮಾಡಿರುವ ಅನುದಾನ ಕೆಳಕಂಡಂತಿವೆ;
<table>
<tr><th>ವರ್ಷ</th><th>ಆರ್ಥಿಕ(ರೂ. ಲಕ್ಷಗಳಲ್ಲಿ)</th></tr>
<tr><td>2020-21</td><td>16810.00</td></tr>
<tr><td>2021-22</td><td>16735.00</td></tr>
<tr><td>2022-23</td><td>19932.00</td></tr>
</table>
ಈ ಯೋಜನೆಯನ್ನು 2023-24ನೇ ಸಾಲಿನಲ್ಲಿ ಮುಂದುವರಿಸಲಾಗಿದೆ.<br><br>
ಕೃಷಿ ಯಾಂತ್ರೀಕರಣ ಮತ್ತು ಕೃಷಿ ಸಂಸ್ಕರಣೆ ಯೋಜನೆ:<br>
ಕಳೆದ ಮೂರು ವರ್ಷಗಳಲ್ಲಿ ಕೃಷಿ ಯಾಂತ್ರೀಕರಣ ಹಾಗೂ ಕೃಷಿ ಸಂಸ್ಕರಣೆ ಯೋಜನೆಗಳ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರ ಖರ್ಚು ಮಾಡಿರುವ ಹಣದ ವಿವರಗಳು ಕೆಳಕಂಡಂತಿವೆ;<br>
(ಆರ್ಥಿಕ:ರೂ.ಲಕ್ಷಗಳಲ್ಲಿ)
<table>
<tr><th>ವರ್ಷ</th><th>ಕೃಷಿ ಯಾಂತ್ರೀಕರಣ</th><th>ಕೃಷಿ ಸಂಸ್ಕರಣೆ</th></tr>
<tr><td>2020-21</td><td>39249.13</td><td>7018.33</td></tr>
<tr><td>2021-22</td><td>42897.93</td><td>3727.14</td></tr>
<tr><td>2022-23</td><td>29419.11</td><td>3775.18</td></tr>
</table>
ಈ ಯೋಜನೆಯನ್ನು 2023-24ನೇ ಸಾಲಿನಲ್ಲಿ ಮುಂದುವರಿಸಲಾಗಿದೆ.<br><br>
ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ:<br>
ರಾಜ್ಯ ಸರ್ಕಾರವು 2019 ರ ಆಗಸ್ಟ ಮಾಹೆಯಿಂದ ಹೆಚ್ಚುವರಿಯಾಗಿ ರೂ.4000/ಗಳ ಆರ್ಥಿಕ ನೆರವನ್ನು ಎರಡು ಕಂತುಗಳಲ್ಲಿ ಪಿ.ಎಂ.ಕಿಸಾನ್-ಕರ್ನಾಟಕ ಯೋಜನೆಯಡಿ ನೀಡಲಾಗುತ್ತಿದೆ. ಇಲ್ಲಿಯವರೆಗೆ ರೂ.5793.54 ಕೋಟಿಗಳ ಆರ್ಥಿಕ ನೆರವನ್ನು ರೈತರ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮೂಲಕ ನೀಡಲಾಗಿರುತ್ತದೆ.<br>
2023-24 ನೇ ಸಾಲಿನಲ್ಲಿ ಈ ಯೋಜನೆಗೆ ರೂ. 2000.00 ಕೋಟಿ ಅನುದಾನ ನಿಗದಿಪಡಿಸಿದೆ.
</td>
</tr>
</table>

| | | |
|---|---|---|
| | | **ರೈತಸಿರಿ ಯೋಜನೆ:**<br>ರೈತಸಿರಿ ಯೋಜನೆ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಒಟ್ಟು ರೂ. 2620.10 ಲಕ್ಷ ವೆಚ್ಚವನ್ನು ಭರಿಸಲಾಗಿದ್ದು, ವಿವರ ಈ ಕೆಳಕಂಡಂತಿರುತ್ತದವೆ; |

| ವರ್ಷ | ರಾಜ್ಯ ಸರ್ಕಾರ ಭರಿಸಿದ ವೆಚ್ಚ(ರೂ. ಲಕ್ಷಗಳಲ್ಲಿ) |
|---|---|
| 2020-21 | 422.00 |
| 2021-22 | 1226.00 |
| 2022-23 | 972.10 |

ರೈತಸಿರಿ ಯೋಜನೆಯು 2023-24ನೇ ಸಾಲಿನಲ್ಲಿಯೂ ಮುಂದುವರೆದಿರುತ್ತದೆ.

**ಮಣ್ಣಿನ ಸತ್ವ ಹೆಚ್ಚಿಸುವಿಕೆ ಯೋಜನೆ:**

ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರ ಖರ್ಚು ಮಾಡಿರುವ ಹಣದ ವಿವರ:

| ವರ್ಷ | ರಾಜ್ಯ ಸರ್ಕಾರ ಖರ್ಚು ಮಾಡಿರುವ ಹಣದ ವಿವರ (ರೂ.ಲಕ್ಷ ಗಳಲ್ಲಿ) |
|---|---|
| 2020-21 | 1488.2 |
| 2021-22 | 294.83 |
| 2022-23 | 241.80 |

ಮಣ್ಣಿನ ಸತ್ವ ಹೆಚ್ಚಿಸುವಿಕೆ ಯೋಜನೆಯನ್ನು 2022-23ನೇ ಸಾಲಿನವರೆಗೆ ಅನುಷ್ಠಾನಗೊಳಿಸಲಾಗಿದ್ದು, 2023-24ನೇ ಸಾಲಿನ ಆಯವ್ಯಯದಲ್ಲಿ ಸದರಿ ಯೋಜನೆಯನ್ನು ಕೈಬಿಡಲಾಗಿದೆ.

**ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನ:**

ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರ ಖರ್ಚು ಮಾಡಿರುವ ಹಣದ ವಿವರ:

| ವರ್ಷ | ರಾಜ್ಯ ಸರ್ಕಾರ ಖರ್ಚು ಮಾಡಿರುವ ಹಣದ ವಿವರ (ರೂ.ಲಕ್ಷ ಗಳಲ್ಲಿ) |
|---|---|
| 2020-21 | - |
| 2021-22 | 490.99 |
| 2022-23 | 712.11 |

ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನ 2023-24 ನೇ ಸಾಲಿನಲ್ಲಿ ಮುಂದುವರೆದಿರುತ್ತದೆ.

**ಸಸ್ಯ ಸಂರಕ್ಷಣಾ ಯೋಜನೆ:**

ಸಸ್ಯ ಸಂರಕ್ಷಣಾ ಯೋಜನೆಯ ಅನುಷ್ಠಾನಕ್ಕಾಗಿ ಕಳೆದ ಮೂರು ವರ್ಷಗಳಲ್ಲಿ ಕೆಳಕಂಡಂತೆ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು ಸಾಧಿಸಲಾಗಿದೆ. ಸಸ್ಯ ಸಂರಕ್ಷಣೆ ಯೋಜನೆಯು ಚಾಲ್ತಿ ಯೋಜನೆಯಾಗಿರುತ್ತದೆ.

| **ವರ್ಷ** | **ಭರಿಸಲಾದ ಅನುದಾನ (ರೂ. ಲಕ್ಷಗಳಲ್ಲಿ)** |
|---|---|
| 2020-21 | 525.33 |
| 2021-22 | 225.97 |
| 2022-23 | 905.68 |

**ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ:**

2020-21 ರಿಂದ 2022-23ನೇ ಸಾಲಿನವರೆಗೆ ರಾಜ್ಯ ಸರ್ಕಾರವು ಖರ್ಚು ಮಾಡಿದ ಅನುದಾನದ ವಿವರ ಈ ಕೆಳಕಂಡಂತಿದೆ.

| **ವರ್ಷ** | **ಖರ್ಚು ಮಾಡಿದ ಅನುದಾನ (ರೂ. ಲಕ್ಷಗಳಲ್ಲಿ)** |
|---|---|
| 2020-21 | 124778.00 |
| 2021-22 | 119260.00 |
| 2022-23 | 149250.00 |

ಕರ್ನಾಟಕ ರೈತ ಸುರಕ್ಷಾ, ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು 2023-24ನೇ ಸಾಲಿನಲ್ಲಿ ಮುಂದುವರೆಸಲಾಗಿದೆ.

**ಸಂಖ್ಯೆ:AGRI/126/AML/2023**

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು